ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ: ಕಶಾಪ&ಮೌಮ/ಪರೀಕ್ಷೆ/ಅ.ವಿ.ದಿ.ವಿ/2022-23 ದಿನಾಂಕ : 22.12.2022

ಸುತ್ತೋಲೆ

ವಿಷಯ: 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ:
1. ಪಪೂಶಿಇ/ಪರೀಕ್ಷೆ/ಪು.ವಿ.ಅ/2022-23 ದಿನಾಂಕ 10.10.2022
2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ : ದಿನಾಂಕ 16.11.2022
3. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ : ದಿನಾಂಕ 01.12.2022

* * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ-3ರ ಸುತ್ತೋಲೆಯನ್ವಯ 12.12.2022 ರವರೆಗೆ ರೂ 1,320/- ವಿಶೇಷ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆ ಮತ್ತು ಮನವಿ ಪತ್ರಗಳ ಮೇರೆಗೆ ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ. ಇದು ವಿದ್ಯಾರ್ಥಿಗಳಿಗೆ ಅಂತಿಮ ಅವಕಾಶವಾಗಿದ್ದು, ಮುಂದೆ ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

| ಕ್ರಮ ಸಂಖ್ಯೆ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡಶುಲ್ಕ 500/- ರೂಗಳು ಹಾಗೂ 700/- ರೂಗಳು ಹಾಗೂ ವಿಶೇಷ ದಂಡ ಶುಲ್ಕ 1,320/- ರೂಗಳು | 23.12.2022 ರಿಂದ 31.12.2022 | 02.01.2023 | 02.01.2023 | 03.01.2023 |

Scanned with CamScanner

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS Portal ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು ಭರ್ತಿಮಾಡಿದ OMR / MCA, ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಕ್ರೂಢೀಕೃತ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಮತ್ತು ಚೆಕ್‌ಲಿಸ್ಟ್‌ನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ 05.01.2023

ನಿರ್ದೇಶಕರು (ಪರೀಕ್ಷೆಗಳು)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ

ಪ್ರತಿಗಳು :

1. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು ಇವರ ಆಪ್ತ ಶಾಖೆಗೆ, ಮಾನ್ಯ ಅಧ್ಯಕ್ಷರ ಅವಗಾಹನೆಗೆ ತರಲು.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
3. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ (ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
4. ಸಹಾಯಕ ನಿರ್ದೇಶಕರು, ಗಣಕಶಾಖೆ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು (ಮಂಡಲಿ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
5. ಹೆಚ್ಚುವರಿ / ಕಛೇರಿ ಪ್ರತಿ.

Scanned with CamScanner